# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1939(2298)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು

ವಿಷಯ : ಕಳೆದ 3 ವರ್ಷಗಳಿಂದ ಅಲ್ಪ ಸಂಖ್ಯಾತರ ಅಭಿವೃದ್ಧಿ ಕುರಿತು

(ಅ) ಕಳೆದ 3 ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ರಾಜ್ಯದಲ್ಲಿ ವಿವಿಧ ಯೋಜನೆಗಳಡಿ ಮಂಜೂರಾದ ಅನುದಾನವೆಷ್ಟು; ಇದರಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಯಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು; ಬಾಕಿ ಉಳಿಯಲು ಕಾರಣಗಳೇನು; ಯಾವಾಗ ಬಿಡುಗಡೆ ಮಾಡಲಾಗುವುದು; (ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳ ಮೊತ್ತವೆಷ್ಟು; ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು; (ಕಾಮಗಾರಿ ಹೆಸರು, ಗ್ರಾಮ ಮತ್ತು ತಾಲ್ಲೂಕಿನ ವಿವರ ನೀಡುವುದು)

(ಇ) ರಾಜ್ಯದಲ್ಲಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಮೂಲಭೂತ ಸೌಲಭ್ಯಗಳಿಲ್ಲದೆ ಅವರು ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಲ್ಪಸಂಖ್ಯಾತರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)